**ಶ್ರೀ ಜಗದೇವ ಗುತ್ತೇದಾರ, ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ "ಅಂಗನವಾಡಿಗೆ 50 ವರ್ಷ ತುಂಬಿದ ಹೊತ್ತಿನಲ್ಲಿ ಸ್ವಂತ ಕಟ್ಟಡಗಳಿಲ್ಲದೇ, ಕಳಪೆ ಪೌಷ್ಠಿಕ ಆಹಾರ ಪೂರೈಕೆ, ದಾಖಲಾತಿ ಕುಸಿತ, ಹುದ್ದೆಗಳ ಖಾಲಿ ಸಮಸ್ಯೆಗಳ ಬಗ್ಗೆ" ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

** ** **

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 125 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ರಾಜ್ಯದ 204 ಯೋಜನೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, 69,922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ರಾಜ್ಯದಲ್ಲಿ 66,946 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 60,105 ಸಹಾಯಕಿಯರು ಕಾರ್ಯನಿರ್ವಹಿಸುತ್ತಿದ್ದಾರೆ.

**1. ಅಂಗನವಾಡಿ ಕಟ್ಟಡಗಳ ಮೂಲಭೂತ ಸೌಕರ್ಯ (ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶಾಶ್ವತ ವಿದ್ಯುತ್ ಸಂಪರ್ಕ, ಶೌಚಾಲಯ) :**

ರಾಜ್ಯದಲ್ಲಿ ಒಟ್ಟು 69,922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, 47,624 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ, 13,301 ಬಾಡಿಗೆ ಕಟ್ಟಡಗಳಲ್ಲಿ, 4,138 ಶಾಲಾ ಆವರಣದಲ್ಲಿ, 628 ಪಂಚಾಯತ್ ಕಟ್ಟಡಗಳಲ್ಲಿ, 2,654 ಸಮುದಾಯ ಭವನದಲ್ಲಿ, 1577 ಇತರೆ ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

ಸ್ವಂತ ಕಟ್ಟಡಗಳು ಇಲ್ಲದೇ ಇರುವ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕಳೆದ 5 ವರ್ಷಗಳಲ್ಲಿ ಈ ಕೆಳಕಂಡಂತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

| ವರ್ಷ | ಯೋಜನೆ ಹೆಸರು | ಅಂಗನವಾಡಿ ಕೇಂದ್ರಗಳ ಸಂಖ್ಯೆ |
|---|---|---|
| 2021-22 | ಐ.ಸಿ.ಡಿ.ಎಸ್. ನರೇಗಾ | 100 |
| | ವಿಶೇಷ ಅಭಿವೃದ್ಧಿ ಯೋಜನೆ | 400 |
| | SCSP/TSP ಉಳಿಕೆ ಅನುದಾನ | 09 |
| 2022-23 | ಐ.ಸಿ.ಡಿ.ಎಸ್. ನರೇಗಾ | 456 |
| | ಮಹತ್ವಾಕಾಂಕ್ಷೆ ತಾಲ್ಲೂಕು | 100 |
| | ಕೇಂದ್ರ ಪುರಸ್ಕೃತ ಯೋಜನೆ | 101 |
| 2023-24 | ಐ.ಸಿ.ಡಿ.ಎಸ್. ನರೇಗಾ | 250 |
| | ನಗರ ಯೋಜನೆ | 175 |
| | ಕೇಂದ್ರ ಪುರಸ್ಕೃತ ನರೇಗಾ | 160 |
| | PM-JANMAN | 23 |
| | DA-JGUA | 164 |
| | CEPMIZ | 532 |
| 2024-25 | ಐ.ಸಿ.ಡಿ.ಎಸ್. ನರೇಗಾ | 417 |
| | ನಗರ ಯೋಜನೆ | 175 |
| 2025-26 | ಐ.ಸಿ.ಡಿ.ಎಸ್. ನರೇಗಾ | 292 |
| | ನಗರ ಯೋಜನೆ | 100 |
| | **ಒಟ್ಟು** | **3454** |

2

ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅನುದಾನ ಹಾಗೂ ನಿವೇಶನ ಲಭ್ಯತೆಯ ಆಧಾರದ ಮೇರೆಗೆ ಹಂತ-ಹಂತವಾಗಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರಸ್ತುತ ಅಂಗನವಾಡಿ ಕೇಂದ್ರಗಳಲ್ಲಿನ ಮೂಲಭೂತ ಸೌಕರ್ಯಗಳ ವಿವರ ಈ ಕೆಳಗಿನಂತಿದೆ.

| **ಮೂಲಭೂತ ಸೌಕರ್ಯ** | **ಇರುವುದು** | **ಇಲ್ಲದೇ ಇರುವುದು** |
|---|---|---|
| ವಿದ್ಯುತ್ ಸಂಪರ್ಕ | 66752 | 3170 |
| ನೀರಿನ ಸಂಪರ್ಕ | 66559 | 3363 |
| ಶೌಚಾಲಯ | 67229 | 2693 |

ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದ ನಿಯಮಾನುಸಾರ ಪ್ರತೀ ವರ್ಷ ದುರಸ್ತಿಗೆ ಒಳಪಡುವ ಅಂಗನವಾಡಿ ಕೇಂದ್ರಗಳ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಸದರಿ ಪ್ರಕ್ರಿಯೆಯು ನಿರಂತರವಾಗಿದ್ದು, ಪ್ರತೀ ವರ್ಷ ಅಂಗನವಾಡಿ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯಗಳಿಗೆ ಸಂಬಂಧಿಸಿದಂತೆ ದುರಸ್ತಿ/ ನಿರ್ವಹಣೆಗಾಗಿ ಅಂಗನವಾಡಿ ಕಟ್ಟಡಗಳ ನಿರ್ವಹಣೆ, ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್, ಜಿಲ್ಲಾ / ತಾಲ್ಲೂಕು ಪಂಚಾಯತ್ ಅನಿರ್ಬಂಧಿತ ನಿಧಿ ಯೋಜನೆಗಳಡಿ ಅನುದಾನ ಒದಗಿಸಿ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಕಳೆದ 5 ವರ್ಷಗಳಲ್ಲಿ ಈ ಕೆಳಕಂಡಂತೆ ಅಂಗನವಾಡಿ ಕಟ್ಟಡಗಳ ನಿರ್ವಹಣೆ / ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

| **ವರ್ಷ** | **ಯೋಜನೆ ಹೆಸರು** | **ಅನುದಾನ (ರೂ.ಕೋಟಿಗಳಲ್ಲಿ)** |
|---|---|---|
| 2021-22 | ಅಂಗನವಾಡಿ ಕಟ್ಟಡಗಳ ನಿರ್ವಹಣೆ | 35.00 |
| | ಆಜಾದಿ ಕಾ ಅಮೃತ ಮಹೋತ್ಸವದ ಸಂದರ್ಭದಲ್ಲಿ ಅಂಗನವಾಡಿ ಕಟ್ಟಡಗಳ ಉನ್ನತೀಕರಣ | 7.50 |
| | ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ | 25.00 |
| 2022-23 | ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ | 28.80 |
| 2023-24 | ಅಂಗನವಾಡಿ ಕಟ್ಟಡಗಳ ನಿರ್ವಹಣೆ | 10.00 |
| | ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ | 30.33 |
| | CEPMIZ | 27.86 |
| 2024-25 | ಅಂಗನವಾಡಿ ಕಟ್ಟಡಗಳ ನಿರ್ವಹಣೆ | 9.02 |
| | ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ | 30.33 |
| 2025-26 | ಅಂಗನವಾಡಿ ಕಟ್ಟಡಗಳ ನಿರ್ವಹಣೆ | 11.00 |
| | ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ | 30.57 |
| | **ಒಟ್ಟು** | **245.41** |

ಕಲ್ಬುರ್ಗಿ ಮತ್ತು ಚಿಕ್ಕಬಳ್ಳಾಪುರ ಗ್ರಾಮೀಣ ಕೇಂದ್ರಗಳಲ್ಲಿನ ಮೂಲಭೂತ ಸೌಕರ್ಯದ ವಿವರ :

| **ವಿವರ** | **ಕಲಬುರಗಿ** | **ಚಿಕ್ಕಬಳ್ಳಾಪುರ** |
|---|---|---|
| ಅಂಗನವಾಡಿ ಕೇಂದ್ರಗಳ ಸಂಖ್ಯೆ | 3420 | 2014 |
| ವಿದ್ಯುತ್ ಸಂಪರ್ಕ | 3119 | 1979 |
| ನೀರಿನ ಸಂಪರ್ಕ | 3177 | 1999 |
| ಶೌಚಾಲಯ | 3218 | 2001 |

## 2. ಹಲವು ಜಿಲ್ಲೆಗಳಲ್ಲಿ ನೂರಾರು ಸಿಬ್ಬಂದಿ ಹುದ್ದೆಗಳು ಖಾಲಿಯಿರುವ ಬಗ್ಗೆ:

ರಾಜ್ಯದಲ್ಲಿ 69,922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರಸಕ್ತ ಸಾಲಿನಲ್ಲಿ 2,641 ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳು ಹೊಸದಾಗಿ ಆನ್‌ಲೈನ್ ತಂತ್ರಾಂಶದ ಮೂಲಕ ನೇಮಕಾತಿಯಾಗಿದ್ದು, ಒಟ್ಟಾರೆ ರಾಜ್ಯದಲ್ಲಿ 66,946 ಅಂಗನವಾಡಿ ಕಾರ್ಯಕರ್ತೆಯರು ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಮುಂದುವರೆದು, ಅಕ್ಟೋಬರ್ 2025 ರ ಏಕಕಾಲಿಕ ನಿವೃತ್ತಿಯ ನಂತರ ಖಾಲಿ ಇರುವ 2,976 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳನ್ನು 3 ತಿಂಗಳೊಳಗಾಗಿ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗಿದೆ.

## 3. ಶಿವಮೊಗ್ಗ ಮತ್ತು ಕೋಲಾರದಲ್ಲಿ ಘೋಷಿಸಲಾದ ಸ್ಮಾರ್ಟ್ ಅಂಗನವಾಡಿ ಯೋಜನೆ ಅನುಷ್ಠಾನದ ಕುರಿತು :

2024-25ನೇ ಸಾಲಿನಲ್ಲಿ 17,454 ಅಂಗನವಾಡಿ ಕೇಂದ್ರಗಳನ್ನು ಸಕ್ಷಮ್ ಅಂಗನವಾಡಿ ಕೇಂದ್ರಗಳನ್ನಾಗಿ ಉನ್ನತೀಕರಿಸಿ ಶಾಲಾಪೂರ್ವ ಶಿಕ್ಷಣ ಬಲವರ್ಧನೆಗೆ ಸಂಬಂಧಿಸಿದಂತೆ ಅಂಗನವಾಡಿ ಕೇಂದ್ರಗಳನ್ನು ಸ್ಮಾರ್ಟ್ ಅಂಗನವಾಡಿ ಕೇಂದ್ರಗಳನ್ನಾಗಿ ಕೆಳಕಂಡ ಸೌಲಭ್ಯಗಳನ್ನು ಒದಗಿಸಿ ಪರಿವರ್ತಿಸಲಾಗಿರುತ್ತದೆ.

- Smart LED TV, Teaching Learning Software, Pen drive (ಮಕ್ಕಳ ಶಾಲಾಪೂರ್ವ ಶಿಕ್ಷಣಕ್ಕೆ ಅಗತ್ಯವಿರುವ ವೀಡಿಯೋ ತುಣುಕುಗಳು ಮತ್ತು ಸಾಕ್ಷ್ಯಚಿತ್ರಗಳನ್ನು ಒಳಗೊಂಡಿರುತ್ತದೆ.)
- Teaching, Learning Material
- RO
- ಪೋಷಣ್ ವಾಟಿಕ
- ಶುದ್ಧ ಶೇಖರಣಾ ಸೌಲಭ್ಯ

ಶಿವಮೊಗ್ಗ ಜಿಲ್ಲೆಯಲ್ಲಿ 997, ಕೋಲಾರ ಜಿಲ್ಲೆಯಲ್ಲಿ 400 ಅಂಗನವಾಡಿ ಕೇಂದ್ರಗಳನ್ನು ಸಕ್ಷಮ್ ಅಂಗನವಾಡಿ ಕೇಂದ್ರಗಳನ್ನಾಗಿ ಈಗಾಗಲೇ ಉನ್ನತೀಕರಿಸಲಾಗಿದೆ.

ಕೋಲಾರ ಜಿಲ್ಲೆಯಲ್ಲಿ ಒಟ್ಟು 2180 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ವಿವರ ಈ ಕೆಳಗಿನಂತಿದೆ.

| | |
|---|---|
| ಸ್ವಂತ ಕಟ್ಟಡ | 1137 |
| ಬಾಡಿಗೆ ಕಟ್ಟಡ | 430 |
| ಸಮುದಾಯ ಭವನ | 203 |
| ಶಾಲಾ ಕಟ್ಟಡ | 341 |
| ಪಂಚಾಯಿತಿ ಕಟ್ಟಡ | 69 |
| **ಒಟ್ಟು** | **2180** |

ಕೋಲಾರ ಜಿಲ್ಲೆಗೆ 2020-21ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಹೊಸ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಬಿಡುಗಡೆ ಮಾಡಿದ ಅನುದಾನದ ವಿವರ.

| ವರ್ಷ | ಮಂಜೂರು ಮಾಡಿದ ಕಟ್ಟಡಗಳ ಸಂಖ್ಯೆ | ಒಟ್ಟು ಬಿಡುಗಡೆ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 2020-21 | 46 | 524.50 |
| 2021-22 | 23 | 148.33 |
| 2022-23 | 7 | 136.00 |
| 2023-24 | 47 | 452.00 |
| 2024-25 | 20 | 280.00 |
| 2025-26 | 9 | 132.00 |
| **ಒಟ್ಟು** | **152** | **1672.83** |

**4. ಕೆಲವು ಕಡೆಗಳಲ್ಲಿ ಪೋಷಣ್ ಟ್ರ್ಯಾಕರ್ ಮತ್ತು ಆಧಾರ್ ಲಿಂಕ್ ನಂತಹ ತಾಂತ್ರಿಕ ಅಡಚಣೆಗಳಿಂದ ಆಹಾರ ವಿತರಣೆಯಲ್ಲಿ ಸಮಸ್ಯೆ ಎದುರಾಗಿದೆ ಹಾಗೂ ಪೂರಕ ಪೌಷ್ಟಿಕ ಆಹಾರ ಗುಣಮಟ್ಟದ ಸಮಸ್ಯೆ:**

ರಾಜ್ಯದಲ್ಲಿರುವ ಅಂಗನವಾಡಿಗಳಲ್ಲಿ ಆಹಾರ ವಿತರಣೆ ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:

I. ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ: 07-10-2004ರ ಆದೇಶದ ಸೂಚನೆಯಂತೆ 2008 ರಿಂದ ಇಲ್ಲಿಯವರೆಗೆ ಸರ್ಕಾರದ ವತಿಯಿಂದಲೇ ಸ್ಥಾಪಿಸಲಾದ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಕೇಂದ್ರ (ಎಂ.ಎಸ್.ಪಿ.ಸಿ.) ಗಳಿಂದ ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿನ ಫಲಾನುಭವಿಗಳಿಗೆ ಪೂರಕ ಪೌಷ್ಟಿಕ ಆಹಾರವನ್ನು ಸರಬರಾಜು ಮಾಡಲಾಗುತ್ತಿದೆ. ಈ ಎಂ.ಎಸ್.ಪಿ.ಸಿಗಳು ಆಹಾರ ಉತ್ಪಾದನೆ ಹಾಗೂ ಪ್ಯಾಕಿಂಗ್‌ಗೆ ಸಂಬಂಧಿಸಿದಂತೆ FSSAIನಿಂದ ಪರವಾನಗಿ ಪಡೆದಿರುತ್ತದೆ.

II. 2017 ರಲ್ಲಿ ಕೇಂದ್ರ ಸರ್ಕಾರ ನಿಗದಿಪಡಿಸಿದ ಘಟಕ ವೆಚ್ಚ ಹಾಗೂ ಮಾರ್ಗಸೂಚಿಯಂತೆ ಕ್ಯಾಲೋರಿಗಳು, ಮೈಕ್ರೋ ನ್ಯೂಟ್ರಿಯೆಂಟ್ಸ್ ಮತ್ತು ಪ್ರೋಟೀನ್‌ಗಳನ್ನು ಒಳಗೊಂಡ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಎಂ.ಎಸ್.ಪಿ.ಸಿ.ಗಳಿಂದ ಅಂಗನವಾಡಿಗಳಿಗೆ ಸರಬರಾಜು ಮಾಡಲಾಗುತ್ತಿದೆ.

III. ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ಸಕಾಲದಲ್ಲಿ ಉತ್ತಮ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರವನ್ನು ಪೂರೈಸಲು ಮತ್ತು ಅದರ ಮೇಲ್ವಿಚಾರಣೆ ಮಾಡಲು ಅನುಕೂಲವಾಗುವಂತೆ, ಪ್ರತಿ ತಿಂಗಳು ಫಲಾನುಭವಿಗಳ ವಿವರಗಳೊಂದಿಗೆ ಬೇಡಿಕೆಯನ್ನು (ಇಂಡೆಂಟ್) ಎಂ.ಎಸ್.ಪಿ.ಸಿ.ಗಳಿಗೆ ಸಲ್ಲಿಸಲಾಗುತ್ತಿದೆ. ಬೇಡಿಕೆಗೆ ಅನುಗುಣವಾಗಿ ಎಂ.ಎಸ್.ಪಿ.ಸಿ.ಗಳು ಆಹಾರ ಪದಾರ್ಥಗಳನ್ನು ನೇರವಾಗಿ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿವೆ.

IV. ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಆಹಾರ ಪದಾರ್ಥಗಳನ್ನು ವಿತರಿಸುವ ಮುನ್ನ NABL (National Accreditation Board for Testing and Calibration Laboratories) ನಲ್ಲಿ ನೋಂದಾಯಿತವಾದ ಪ್ರಯೋಗಾಲಯಗಳ ಮೂಲಕ ಆಹಾರದಲ್ಲಿನ ಪೌಷ್ಟಿಕಾಂಶಗಳ ಗುಣಮಟ್ಟ ಮತ್ತು ನಿಯತಾಂಕಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ ಉತ್ತಮ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರವನ್ನು ಎಂ.ಎಸ್.ಪಿ.ಸಿ.ಗಳಿಂದ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.

V. ಪೂರಕ ಪೌಷ್ಟಿಕ ಆಹಾರದ ಗುಣಮಟ್ಟದ ಖಾತ್ರಿಗಾಗಿ ಮಾನ್ಯ ಸರ್ವೋಚ್ಚ ಹಾಗೂ ಉಚ್ಚ ನ್ಯಾಯಾಲಯಗಳ ಆದೇಶದ ಅನುಷ್ಠಾನಕ್ಕಾಗಿ ಎಂ.ಎಸ್.ಪಿ.ಸಿಗಳು ತಮ್ಮ ಹಂತದಲ್ಲಿಯೇ ಬಿ.ಐ.ಎಸ್. ಪರವಾನಗಿ ಪಡೆದ ಅರ್ಹ ಮಹಿಳಾ ಗುಂಪುಗಳೊಂದಿಗೆ ಸರ್ಕಾರಕ್ಕೆ ಯಾವುದೇ ಹೆಚ್ಚುವರಿ ಆರ್ಥಿಕ ಹೊರೆಯಿಲ್ಲದಂತೆ ತಾಂತ್ರಿಕ ನೆರವನ್ನು ಪಡೆಯಲಾಗುತ್ತಿದೆ.

VI. ಪೂರಕ ಪೌಷ್ಟಿಕ ಆಹಾರವು ಸಕಾಲಕ್ಕೆ ಪೂರೈಕೆಯಾಗುತ್ತಿರುವುದನ್ನು ಮತ್ತು ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಣೆಯಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಪಾರದರ್ಶಕತೆ ಹೆಚ್ಚಿಸಲು ಕೇಂದ್ರ ಸರ್ಕಾರದ ಪೋಷಣ್ ಟ್ರ್ಯಾಕರ್ ಅಪ್ಲಿಕೇಶನ್ ಹಾಗೂ ಫೇಸ್ ರೆಕಗ್ನಿಷನ್ ಸಿಸ್ಟಮ್ (FRS) ಮೂಲಕ ನೈಜ ಸಮಯದಲ್ಲಿ ಮೇಲ್ವಿಚಾರಣೆ (Real Time Monitoring) ಮಾಡಲಾಗುತ್ತಿದೆ. ಫೇಸ್ ರೆಕಗ್ನಿಷನ್ ಸಿಸ್ಟಮ್ (FRS) ಅಳವಡಿಕೆಯಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ 02 ಸ್ಥಾನದಲ್ಲಿರುತ್ತದೆ.

VII. ಪೂರಕ ಪೌಷ್ಟಿಕ ಆಹಾರದ ಸಕಾಲಿಕ ಸರಬರಾಜು ಮತ್ತು ಗುಣಮಟ್ಟದ ಮೇಲ್ವಿಚಾರಣೆ ಮಾಡಲು ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ ಹಾಗೂ ಪ್ರತಿ ಅಂಗನವಾಡಿಯ ಹಂತದಲ್ಲಿ ಬಾಲವಿಕಾಸ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ.

VIII. ಇಲಾಖೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಅಂಗನವಾಡಿ ಕೇಂದ್ರಗಳ ಕುರಿತು ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಲು ಹಾಗೂ ಜವಾಬ್ದಾರಿ ಕಾರ್ಯನಿರ್ವಹಣೆಯನ್ನು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ.

IX. ಆಹಾರ ಪದಾರ್ಥಗಳ ಗುಣಮಟ್ಟ ಹಾಗೂ ಸರಬರಾಜಿನಲ್ಲಿ ವ್ಯತ್ಯಯ ಉಂಟಾದಲ್ಲಿ ಎಂ.ಎಸ್.ಪಿ.ಸಿ.ಗಳ ವಿರುದ್ಧ ದೂರುಗಳು ಬಂದ ಕೂಡಲೇ, ಅಂತಹ ಎಂ.ಎಸ್.ಪಿ.ಸಿ.ಗಳ ಕಾರ್ಯನಿರ್ವಹಣೆಯನ್ನು ಅಮಾನತ್ತುಗೊಳಿಸಲಾಗುವುದು. ಸದರಿ ಎಂ.ಎಸ್.ಪಿ.ಸಿಗಳು ತಮ್ಮ ನ್ಯೂನ್ಯತೆಗಳನ್ನು ಅಥವಾ ಲೋಪದೋಷಗಳನ್ನು ಸರಿಪಡಿಸಿಕೊಂಡ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಿದ ನಂತರವೇ, ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಕೆ ಮಾಡಲು ಅನುಮತಿ ನೀಡಲಾಗುತ್ತಿದೆ.

ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿ ದಾಖಲಾದ ಗರ್ಭಿಣಿ, ಬಾಣಂತಿ ಹಾಗೂ 0-6 ವರ್ಷದ ಫಲಾನುಭವಿಗಳ ಆಧಾರ್ ವೆರಿಫೈಡ್ ವರದಿಯನ್ವಯ ಕರ್ನಾಟಕ ರಾಜ್ಯವು ದೇಶದಲ್ಲಿ 2ನೇ ಸ್ಥಾನದಲ್ಲಿದೆ. ಅಂಗನವಾಡಿ ಕೇಂದ್ರದಲ್ಲಿ ದಾಖಲಾದ ಫಲಾನುಭವಿಗಳಿಗೆ ಆಧಾರ್ ವೆರಿಫೈಡ್ ವರದಿಯು ಈ ಕೆಳಕಂಡಂತಿದೆ.

- 2023-24ನೇ ಸಾಲಿನಲ್ಲಿ ಮಾರ್ಚ್ – 2024 ರ ಅಂತ್ಯಕ್ಕೆ
  1. ಒಟ್ಟು ದಾಖಲಾದ ಫಲಾನುಭವಿಗಳ ಸಂಖ್ಯೆ : 38,93,731
  2. ಆಧಾರ್ ವೆರಿಫೈಡಿ ಫಲಾನುಭವಿಗಳ ಸಂಖ್ಯೆ : 37,97,615
  3. ಶೇಕಡವಾರು : 97.54%

- 2024-25ನೇ ಸಾಲಿನಲ್ಲಿ ಮಾರ್ಚ್ – 2025 ರ ಅಂತ್ಯಕ್ಕೆ
  1. ಒಟ್ಟು ದಾಖಲಾದ ಫಲಾನುಭವಿಗಳ ಸಂಖ್ಯೆ : 43,88,557
  2. ಆಧಾರ್ ವೆರಿಫೈಡ್ ಫಲಾನುಭವಿಗಳ ಸಂಖ್ಯೆ : 43,72,893
  3. ಶೇಕಡವಾರು : 99.64%

- 2024-25ನೇ ಸಾಲಿನಲ್ಲಿ ನವೆಂಬರ್ – 2025 ರ ಅಂತ್ಯಕ್ಕೆ
  1. ಒಟ್ಟು ದಾಖಲಾದ ಫಲಾನುಭವಿಗಳ ಸಂಖ್ಯೆ : 38,78,730
  2. ಆಧಾರ್ ವೆರಿಫೈಡ್ ಫಲಾನುಭವಿಗಳ ಸಂಖ್ಯೆ : 38,77,516
  3. ಶೇಕಡವಾರು : 97.97%

ಈ ಮೇಲ್ಕಂಡ ವರದಿಯನ್ವಯ ಅಂಗನವಾಡಿ ಕೇಂದ್ರದಲ್ಲಿ ದಾಖಲಾದ ಗರ್ಭಿಣಿ, ಬಾಣಂತಿ ಹಾಗೂ 0-6 ವರ್ಷದ ಎಲ್ಲಾ ಫಲಾನುಭವಿಗಳು ಒಳಗೊಂಡಿದ್ದು, ಆಧಾರ್ ವೆರಿಫೈಡ್ ಮೂಲಕ ಪೂರಕ ಪೌಷ್ಠಿಕ ಆಹಾರ ವಿತರಣೆ ಮಾಡಲಾಗುತ್ತಿದೆ.

**5. ಅಪೌಷ್ಠಿಕತೆ ನಿವಾರಣೆ ಕ್ರಮ : ಮಕ್ಕಳ ಅಪೌಷ್ಠಿಕತೆ ನಿವಾರಣೆಗೆ ಸರ್ಕಾರದ ವತಿಯಿಂದ ಕೈಗೊಂಡ ಕ್ರಮಗಳು :**

**1. ಪೂರಕ ಪೌಷ್ಠಿಕ ಆಹಾರ:**

**(ಎ) ಮಾತೃಪೂರ್ಣ ಯೋಜನೆ:** ಮಾತೃಪೂರ್ಣ ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡಲಾಗುತ್ತದೆ.

ಕೇಂದ್ರ ಸರ್ಕಾರದ ರೂ.4.75 ರ ಅನುದಾನದೊಂದಿಗೆ ರೂ.16.25 ರ ರಾಜ್ಯ ಸರ್ಕಾರದ ಹೆಚ್ಚುವರಿ ಅನುದಾನ ಸೇರಿ ಒಟ್ಟು ರೂ. 21.00ರ ಘಟಕ ವೆಚ್ಚದಲ್ಲಿ ಗರ್ಭಿಣಿ, ಬಾಣಂತಿಯರಲ್ಲಿ ಅಪೌಷ್ಠಿಕತೆ ಮತ್ತು ರಕ್ತಹೀನತೆ ತಡೆಯಲು ಅನುವಾಗುವಂತೆ ಬಿಸಿಯೂಟವನ್ನು ಸಿದ್ಧಪಡಿಸಿ ಅಂಗನವಾಡಿ ಕೇಂದ್ರದಲ್ಲಿಯೇ ವಿತರಣೆ ಮಾಡಲಾಗುತ್ತಿದೆ.

ಮುಂದುವರೆದು, ಪ್ರಸಕ್ತ ಸಾಲಿನಲ್ಲಿ ಫಲಾನುಭವಿಗಳ ಇಚ್ಛೆಗನುಸಾರವಾಗಿ ಅಗತ್ಯವಿರುವ ಕಚ್ಚಾ ಆಹಾರ ಸಾಮಗ್ರಿಗಳನ್ನು ಮನೆಗೆ (THR) ವಿತರಿಸಲಾಗುತ್ತಿದೆ ಹಾಗೂ ಅಂಗನವಾಡಿ ಕೇಂದ್ರದಲ್ಲಿಯೇ ಪೌಷ್ಟಿಕಯುಕ್ತ ಬಿಸಿಯೂಟವನ್ನು ಸ್ವೀಕರಿಸಬಹುದಾಗಿದೆ.

**(ಬಿ) ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ:** ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ **ಪೂರಕ ಪೌಷ್ಟಿಕ ಆಹಾರ**ವನ್ನು ನೀಡಲಾಗುತ್ತಿದೆ.
- **ತೀವ್ರ ಅಪೌಷ್ಟಿಕ** ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ 3 **ವರ್ಷದಿಂದ** 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 **ದಿನ ಮೊಟ್ಟೆಯನ್ನು** ನೀಡಲಾಗುತ್ತಿದೆ.
- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 5 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಟಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಟಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ಅರಿವು ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಹಾಗೂ ಪೋಷಣ್ ಮಾಸಾಚರಣೆ ಕಾರ್ಯಕ್ರಮದಲ್ಲಿಯೂ ಸಹ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿಶೇಷ ಪೌಷ್ಟಿಕ ಶಿಬಿರಗಳನ್ನು ಆಯೋಜಿಸಲಾಗುತ್ತಿರುತ್ತದೆ.

**2. ಚುಚ್ಚು ಮದ್ದು ಕಾರ್ಯಕ್ರಮ: /**

6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**3. ಆರೋಗ್ಯ ತಪಾಸಣೆ:**

ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ (RBSK ಮತ್ತು ವೈದ್ಯಕೀಯ ಅಧಿಕಾರಿಗಳಿಂದ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

1. **ಚಿಗುರು ಕಾರ್ಯಕ್ರಮ:** ಇದಲ್ಲದೇ ಅಪೌಷ್ಟಿಕತೆಯನ್ನು ನಿವಾರಿಸಲು ಸಮುದಾಯ ಆಧಾರಿತ ತೀವ್ರ ಅಪೌಷ್ಟಿಕ ಮಕ್ಕಳ ನಿರ್ವಹಣೆ (C-MAM) ಕಾರ್ಯಕ್ರಮ "ಚಿಗುರು" ಎಂಬ ವಿನೂತನ ಯೋಜನೆಯನ್ನು ಪ್ರಸ್ತುತ ಬಳ್ಳಾರಿ, ಬೀದರ, ಕಲಬುರಗಿ, ಯಾದಗಿರಿ, ಬೆಳಗಾವಿ, ರಾಯಚೂರು, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ.

ಸದರಿ ಯೋಜನೆಯು ಆರಂಭಿಕ ಹಂತಗಳಲ್ಲಿ ತೀವ್ರ ಅಪೌಷ್ಟಿಕತೆಯನ್ನು ಗುರುತಿಸಿ, ವೈದ್ಯಕೀಯ ಸಮಸ್ಯೆಗಳಿಲ್ಲದ ತೀವ್ರ ಮತ್ತು ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವೈದ್ಯಕೀಯ ಪೋಷಕಾಂಶಗಳು ಹಾಗೂ ಹೆಚ್ಚು ಪೋಷಕಾಂಶಯುಕ್ತ ಪೌಷ್ಟಿಕ ಆಹಾರವನ್ನು ನೀಡುವುದರೊಂದಿಗೆ, ಮಕ್ಕಳ ಪೋಷಣೆಯು ತಾಯಿಯ ಜವಾಬ್ದಾರಿ ಮಾತ್ರವಲ್ಲದೇ ಇಡೀ ಕುಟುಂಬದ ಜವಾಬ್ದಾರಿ ಎಂಬ ಪರಿಕಲ್ಪನೆಯಡಿ ರೂಪಿಸಲಾಗಿರುತ್ತದೆ.

2. **ಮಾಹಿತಿ ಸೇವೆ**:ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಟಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿ 2023-24, 2024-25 ನೇ ಹಾಗೂ 2025-26ನೇ ಸಾಲಿನ ಜೂನ್ ಅಂತ್ಯಕ್ಕೆ ದಾಖಲಾಗಿರುವ ಮಕ್ಕಳ ತೂಕ ಮತ್ತು ಎತ್ತರ ಅಳತೆ ಮಾಡಲಾದ ವಿವರ ಈ ಕೆಳಕಂಡಂತಿದೆ:

| ವಿವರ | 2023-24 | | 2024-25 | | 2025-26 | |
|---|---|---|---|---|---|---|
| | ಮಾರ್ಚ್-24ರ ಅಂತ್ಯಕ್ಕೆ | | ಮಾರ್ಚ್-25ರ ಅಂತ್ಯಕ್ಕೆ | | ನವೆಂಬರ್-25ರ ಅಂತ್ಯಕ್ಕೆ | |
| | ಸಂಖ್ಯೆ | (%) | ಸಂಖ್ಯೆ | (%) | ಸಂಖ್ಯೆ | (%) |
| ಒಟ್ಟು ದಾಖಲಾದ ಮಕ್ಕಳು | 3035929 | | 3264207 | | 2892118 | |
| ಅಳತೆ ಮಾಡಲಾದ ಮಕ್ಕಳ ಸಂಖ್ಯೆ | 2937263 | 96.75 | 3237856 | 99.19 | 2878822 | 99.54 |
| ಸಾಧಾರಣ ಅಪೌಷ್ಟಿಕ ಮಕ್ಕಳು | 154854 | 5.27 | 102003 | 3.15 | 74771 | 2.60 |
| ತೀವ್ರ ಅಪೌಷ್ಟಿಕ ಮಕ್ಕಳು | 77482 | 2.64 | 10791 | 0.33 | 7054 | 0.25 |

ರಾಜ್ಯದಲ್ಲಿ ಸಾಧಾರಣ ಅಪೌಷ್ಟಿಕ ಮಕ್ಕಳು ಹಾಗೂ ತೀವ್ರ ಅಪೌಷ್ಟಿಕ ಮಕ್ಕಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿರುವುದು ಕಂಡುಬಂದಿರುತ್ತದೆ.

**ಸಂಖ್ಯೆ:** ಮಮಇ 368 ಐಸಿಡಿ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು